# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ | : 197 |
| ಮಾನ್ಯ ಸದಸ್ಯರ ಹೆಸರು | : ಶ್ರೀ ಆರ್ ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : 01.02.2021 |
| ಉತ್ತರಿಸುವ ಸಚಿವರು | : ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ | ಕೋವಿಡ್ ನಿವಾರಣೆಗಾಗಿ ಕೇಂದ್ರ ಸರ್ಕಾರದ ಸೂಚನೆಯಂತೆ ರಾಜ್ಯದಲ್ಲಿ ಸಾರ್ವಜನಿಕರಿಗೆ ನೀಡುತ್ತಿರುವ ಲಸಿಕೆ ತೆಗೆದುಕೊಳ್ಳಲು ಜನ ಹಿಂದೇಟು ಹಾಕುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಮೊದಲನೇ ಹಂತದಲ್ಲಿ ಕರೊನ ವಾರಿಯರ್ಸ್ ಗಳಿಗೆ ಮಾತ್ರ ಲಸಿಕೆಗಳನ್ನು ನೀಡಲಾಗುತ್ತಿದ್ದು, ಸಾರ್ವಜನಿಕರು ಲಸಿಕೆ ತೆಗೆದುಕೊಳ್ಳಲು ಹಿಂದೇಟು ಹಾಕುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲ. |
| ಆ | ಈ ಲಸಿಕೆ ಸುರಕ್ಷಿತವಲ್ಲ, ಇದರಿಂದ ಅಡ್ಡ ಪರಿಣಾಮಗಳು ಉಂಟಾಗುತ್ತಿದೆ ಎಂಬ ಸುದ್ದಿ ಮಾಧ್ಯಮಗಳಲ್ಲಿ ವರದಿಯಾಗುತ್ತಿದ್ದು, ಈ ಬಗ್ಗೆ ಸರ್ಕಾರದ ಅಭಿಪ್ರಾಯವೇನು: | ಲಸಿಕೆಗಳ ಸುರಕ್ಷಿತತ್ವ ಮತ್ತು ಪರಿಣಾಮಕಾರಿತತ್ವದ ಆಧಾರದ ಮೇಲೆ ನಿಯಂತ್ರಕ ಸಂಸ್ಥೆಗಳಿಂದ ತೆರವುಗೊಳಿಸಿದ ನಂತರವಷ್ಟೆ ಭಾರತ ಸರ್ಕಾರವು ಲಸಿಕೆಗಳನ್ನು ಪರಿಚಯಿಸಿದೆ. ಯಾವುದೇ ಲಸಿಕಾಕರಣದ ನಂತರ ಸಣ್ಣ ಪ್ರಮಾಣದ ಜ್ವರ, ಲಸಿಕೆ ನೀಡಿದ ಸ್ಥಳದಲ್ಲಿ ಸಣ್ಣ ಪ್ರಮಾಣದ ಊತ ಇಂತಹ ಸಂಭಾವ್ಯ ಅಡ್ಡಪರಿಣಾಮಗಳು ಉಂಟಾಗುವಂತೆಯೇ, ಕೋವಿಡ್ ಲಸಿಕಾಕರಣದ ನಂತರವೂ ಇದೇ ರೀತಿಯ ಸಣ್ಣ ಪುಟ್ಟ ಅಡ್ಡ ಪರಿಣಾಮಗಳು ಉಂಟಾಗಬಹುದಾಗಿದ್ದು, ಅಡ್ಡಪರಿಣಾಮಗಳು ಉಂಟಾದ ಪಕ್ಷದಲ್ಲಿ ಯಾರನ್ನು ಸಂಪರ್ಕಿಸಬೇಕೆಂಬ ಮಾಹಿತಿಯನ್ನು ನೀಡಲಾಗುತ್ತಿದೆ ಹಾಗೂ ಇದರ ಕುರಿತು ಮಾಹಿತಿ ಶಿಕ್ಷಣ ಸಂವಹನ(IEC) ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. |
| ಇ | ಲಸಿಕೆಯ ಬಗ್ಗೆ ಜನರಲ್ಲಿ ಭಯ ಉಂಟಾಗಿದ್ದು, ಈ ಭಯ ನಿವಾರಣೆ ಮಾಡಲು ಸರ್ಕಾರ ಯಾವ ಕ್ರಮ ಕೈಗೊಳ್ಳುತ್ತದೆ ? | ಲಸಿಕೆಯ ಬಗ್ಗೆ ಜನರಲ್ಲಿ ಉಂಟಾಗಿರುವ ಭಯ ನಿವಾರಣೆ ಮಾಡಲು ಸರ್ಕಾರ ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿದೆ:<br>1. ಮೊದಲ ಹಂತದ ಲಸಿಕಾಕರಣದಲ್ಲಿ ಇಲಾಖೆಯ ಮುಖ್ಯಸ್ಥರುಗಳು, ಹೆಸರಾಂತ ವೈದ್ಯರು ಲಸಿಕೆಯನ್ನು ಪಡೆದಿದ್ದು, ಅವರ ಅನುಭವವನ್ನು ವೀಡಿಯೋಗಳ ಮೂಲಕ ನೇರವಾಗಿ/ಸಾಮಾಜಿಕ ಜಾಲತಾಣಗಳ ಮೂಲಕ ಪ್ರಚುರಪಡಿಸಲಾಗುತ್ತಿದ್ದು, ಈ ಮುಖೇನ ಜನಸಾಮಾನ್ಯರ ಮನೋಬಲವನ್ನು ಹೆಚ್ಚಿಸಿ ಭಯವನ್ನು ನಿವಾರಣೆಗೊಳಿಸಲಾಗುತ್ತಿದೆ. |

| | | |
|---|---|---|
| | | 2. ಲಸಿಕೆಯ ಪರಿಣಾಮಕಾರಿತ್ವವನ್ನು ಲಸಿಕೆ ಪಡೆಯುವ ಮುಂಚೂಣಿ ಕಾರ್ಯಕರ್ತರ ಮುಖಾಂತರ ಸಮಾಲೋಚನೆ ನಡೆಸಲು ಯೋಜಿಸಲಾಗಿದೆ<br>3. ಇದು ಹೊಸ ಲಸಿಕೆಯಾಗಿರುವುದರಿಂದ ಜನಸಾಮಾನ್ಯರಲ್ಲಿ ಉದ್ಭವಿಸುವ ಸಂದೇಹಗಳನ್ನು ಪರಿಹರಿಸಲು ಸಮೂಹ ಮಾಧ್ಯಮಗಳ ಮುಖೇನ ಸರ್ಕಾರವು ಕಾರ್ಯಕ್ರಮಗಳನ್ನು ಆಯೋಜಿಸಿ, ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ.<br>4. ಅಂಗೀಕೃತವಾದ ಸರ್ಕಾರದ ಮಾಧ್ಯಮ ಪ್ರಕಟಣೆಗಳು, ವೆಬ್‌ಸೈಟ್‌ಗಳು, ಸಾಮಾಜಿಕ ಜಾಲತಾಣಗಳಲ್ಲಿ ಪ್ರಕಟಣೆಗೊಳ್ಳುವಂತಹ ಅಂಗೀಕೃತವಾದ ಮಾಹಿತಿಯನ್ನು ಮಾತ್ರ ಸಾರ್ವಜನಿಕರು ನಂಬಲು ಹಾಗೂ ಸಾಮಾಜಿಕ ಜಾಲತಾಣಗಳಲ್ಲಿ ಹಂಚಿಕೊಳ್ಳಲು ಕೋರಲಾಗಿದೆ.<br>5. ಲಸಿಕೆಗೆ ಸಂಬಂಧಪಟ್ಟಂತಹ ಸಂದೇಹಗಳನ್ನು ನಿವಾರಿಸಲು ಮಾಧ್ಯಮದವರಿಗೆ ತರಬೇತಿ ಕಾರ್ಯಾಗಾರವನ್ನು ಆಯೋಜಿಸಲು ಕ್ರಮಕೈಗೊಳ್ಳಲಾಗುತ್ತಿದೆ.<br>6. ಪದೇ ಪದೇ ಕೇಳಲಾಗುವ ಪ್ರಶ್ನೆಗಳು (FAQs) ಮತ್ತು ಉತ್ತರಗಳನ್ನು ತಯಾರಿಸಿ ಎಲ್ಲಾ ಸಮೂಹ ಮಾಧ್ಯಮಗಳಲ್ಲಿ ಪ್ರಚುರಪಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. |

ಆಕುಕ 03 ಎಸ್‌ಎಂಎಂ 2021

(ಡಾ||ಕೆ.ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ವೈದ್ಯಕೀಯ ಶಿಕ್ಷಣ ಸಚಿವರು